ಜಿಲ್ಲಾಧಿಕಾರಿ ಹಾಗೂ
ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ
ಉಡುಪಿ ಜಿಲ್ಲೆ, "ರಜತಾದ್ರಿ"
ಮಣಿಪಾಲ, ಉಡುಪಿ – 576104
Email: udupidc@gmail.com

(ಕಂದಾಯ ಇಲಾಖೆ)

Deputy Commissioner &
District Magistrate's Office,
Udupi District, " Rajatadri",
Manipal, Udupi - 576104
Office: 0820-2574924, 2574925

ನಂ/MAG(2)/ ಸಿ ಆರ್/180/2025/E-201568 –C1 ದಿನಾಂಕ :02-11-2026

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ಉಡುಪಿ ಜಿಲ್ಲೆ, ಉಡುಪಿ –ಇವರ ನಡವಳಿ

ವಿಷಯ: ಉಡುಪಿ ಹಿರಿಯಡ್ಕ ಪೊಲೀಸ್ ಠಾಣಾ ಸರಹದ್ದಿನಲ್ಲಿ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ 2023ರ ಕಲಂ 163 ರನ್ನಯ ನಿಷೇಧಾಜ್ಞೆಯನ್ನು ಹೊರಡಿಸುವ ಬಗ್ಗೆ.

ಉಲ್ಲೇಖ: ಪೊಲೀಸ್ ಅಧೀಕ್ಷಕರು, ಉಡುಪಿ ಜಿಲ್ಲೆ ಇವರ ಪತ್ರ ಸಂಖ್ಯೆ: 271/ಎಸ್.ಬಿ/ಸಾಮಾನ್ಯ/ಉಜಿ/2026 ದಿನಾಂಕ:02/11/2026.

*****

ಉಲ್ಲೇಖದನ್ವಯ ಪೊಲೀಸ್ ಅಧೀಕ್ಷಕರು, ಉಡುಪಿ ಜಿಲ್ಲೆ ಇವರು ವರದಿ ಸಲ್ಲಿಸಿದ್ದು, ಹಿರಿಯಡ್ಕ ಪೊಲೀಸ್ ಠಾಣಾ ಸರಹದ್ದಿನಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಯಾವುದೇ ಧರಣಿ, ಪ್ರತಿಭಟನೆ, ಮೆರವಣಿಗೆ, ಅನಿರ್ದಿಷ್ಟಾವಧಿ ಮುಷ್ಕರ (ಧಾರ್ಮಿಕ/ಸಾಂಸ್ಕೃತಿಕ ಆಚರಣೆಗಳನ್ನು ಹೊರತುಪಡಿಸಿ)ಗಳನ್ನು ನಡೆಸದಂತೆ ದಿನಾಂಕ:03/11/2026ರ ಬೆಳಿಗ್ಗೆ 06:00 ಗಂಟೆಯಿಂದ ದಿನಾಂಕ:07/11/2026ರ ರಾತ್ರಿ 10:00 ಗಂಟೆಯವರೆಗೆ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163 ರನ್ವಯ ನಿಷೇಧಾಜ್ಞೆ ಹೊರಡಿಸುವಂತೆ ಕೋರಿ ವರದಿಯನ್ನು ಸಲ್ಲಿಸಿರುತ್ತಾರೆ..

ಉಡುಪಿ ಜಿಲ್ಲೆಯ ಪ್ರಸಕ್ತ ವಿದ್ಯಮಾನಗಳನ್ನು ಗಣನೆಗೆ ತೆಗೆದುಕೊಂಡು, ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗೃತಾ ಕ್ರಮವನ್ನು ತೆಗೆದುಕೊಳ್ಳುವುದು ಅತೀ ಅವಶ್ಯಕವಾಗಿರುತ್ತದೆ. ಈ ಹಿನ್ನಲೆಯಲ್ಲಿ ಜಿಲ್ಲೆಯ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ ಹಾಗೂ ಸಾರ್ವಜನಿಕ ಶಾಂತಿಯನ್ನು ಕಾಪಾಡುವ ನಿಟ್ಟಿನಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಎಡೆಮಾಡಿಕೊಡದಂತೆ ಸೂಕ್ತ ಮುಂಜಾಗೃತಾ ಕ್ರಮ ತೆಗೆದುಕೊಳ್ಳಲು ಪೊಲೀಸ್ ಅಧೀಕ್ಷಕರು ಉಡುಪಿ ಜಿಲ್ಲೆ, ಉಡುಪಿ ಇವರ ವರದಿಯನ್ನು ಆಧರಿಸಿ ಮುಂಜಾಗೃತ ಕ್ರಮವಾಗಿ ಸ್ವರೂಪ ಟಿ.ಕೆ. ಭಾ ಆ ಸೇ, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ಉಡುಪಿ ಜಿಲ್ಲೆ, ಉಡುಪಿ ಆದ ನಾನು ಭಾರತೀಯ ನಾಗರಿಕ ಸುರಕ್ಷಾ ಸಂಹಿತ 2023 ರ ಕಲಂ 163 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡಂತೆ ಆದೇಶವನ್ನು ಹೊರಡಿಸಿರುತ್ತೇನೆ..

ಆದೇಶ

ಉಡುಪಿ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ ಹಾಗೂ ಸಾರ್ವಜನಿಕ ಹಿತವನ್ನು ಕಾಪಾಡುವ ನಿಟ್ಟಿನಲ್ಲಿ, **ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023 ರ ಕಲಂ 163 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸ್ವರೂಪ ಟಿ.ಕೆ. ಭಾ ಆ ಸೇ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ಉಡುಪಿ ಜಿಲ್ಲೆ, ಉಡುಪಿ ಆದ ನಾನು ದಿನಾಂಕ:03/11/2026 ರ ಬೆಳಿಗ್ಗೆ 06:00 ಗಂಟೆಯಿಂದ ದಿನಾಂಕ:07/11/2026 ರ ರಾತ್ರಿ 10:00 ಗಂಟೆಯವರೆಗೆ ಉಡುಪಿ ತಾಲೂಕಿನ ಹಿರಿಯಡ್ಕ ಪೊಲೀಸ್ ಠಾಣಾ ಸರಹದ್ದಿನಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಆದೇಶಿಸಿರುತ್ತೇನೆ.**

ನಿಬಂಧನೆಗಳು :

1. ಮೇಲ್ಕಂಡ ಅವಧಿಯಲ್ಲಿ ಸದರಿ ಪ್ರದೇಶದಲ್ಲಿ ಯಾವುದೇ ಧರಣಿ, ಪ್ರತಿಭಟನೆ, ಮೆರವಣಿಗೆ, ಅನಿರ್ದಿಷ್ಟಾವಧಿ ಮುಷ್ಕರ (ಧಾರ್ಮಿಕ/ಸಾಂಸ್ಕೃತಿಕ ಆಚರಣೆಗಳನ್ನು ಹೊರತುಪಡಿಸಿ) ಗಳನ್ನು ನಡೆಸುವಂತಿಲ್ಲ.
2. ನಿಷೇಧಾಜ್ಞೆ ಹೊರಡಿಸಿರುವ ಪ್ರದೇಶದಲ್ಲಿ ಸಾರ್ವಜನಿಕರು 5ಕ್ಕಿಂತ ಹೆಚ್ಚು ಜನ ಸೇರುವಂತಿಲ್ಲ.
3. ಶಸ್ತ್ರ, ಬಡಿಗೆ, ಬರ್ಚಿ, ಖಡ್ಗ, ಗದೆ, ಬಂದೂಕು, ಚೂರಿ, ಲಾಠಿ, ಡೊಣ್ಣೆ, ಚಾಕು ಅಥವಾ ದೇಹಕ್ಕೆ ಅಪಾಯವನ್ನು ಉಂಟು ಮಾಡಬಹುದಾದ ಯಾವುದೇ ಮಾರಕಾಸ್ತ್ರವನ್ನು ತೆಗೆದುಕೊಂಡು ಹೋಗುವುದನ್ನು ಮತ್ತು ಅವುಗಳೊಂದಿಗೆ ತಿರುಗಾಡುವುದನ್ನು ಪ್ರತಿಬಂಧಿಸಲಾಗಿದೆ.

4. ಕಲ್ಲುಗಳನ್ನು, ಕ್ವಾರ ಪದಾರ್ಥ ಇಲ್ಲವೇ ಸ್ಫೋಟಕ ವಸ್ತುಗಳು ಯಾವುದೇ ದಾಹಕ ವಸ್ತುಗಳು ಇತ್ಯಾದಿಗಳನ್ನು ಸದರಿ ಸ್ಥಳಕ್ಕೆ ತೆಗೆದುಕೊಂಡು ಹೋಗುವುದನ್ನು ಹಾಗೂ ಶೇಖರಿಸುವುದನ್ನು ನಿಷೇಧಿಸಲಾಗಿದೆ.
5. ಕಲ್ಲುಗಳನ್ನು ಮತ್ತು ಎಸೆಯುವಂತಹ ವಸ್ತುಗಳನ್ನು ಎಸೆಯುವ ಅಥವಾ ಬಿಡುವ ಸಾಧನಗಳನ್ನು ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ.
6. ಮನುಷ್ಯ ಶವಗಳ ಅಥವಾ ಅವುಗಳ ಆಕೃತಿ ಅಥವಾ ಪ್ರತಿಮೆಗಳ ಪ್ರದರ್ಶನ/ದಹನ ಮಾಡುವುದನ್ನು ಪ್ರತಿಬಂಧಿಸಲಾಗಿದೆ.
7. ಈ ಅವಧಿಯಲ್ಲಿ ಧ್ವನಿವರ್ಧಕಗಳನ್ನು ಬಳಸುವಂತಿಲ್ಲ.
8. ಸದರಿ ಸ್ಥಳದಲ್ಲಿ ಬಹಿರಂಗವಾಗಿ ಘೋಷಣೆ ಮಾಡುವುದು, ಪದ ಹಾಡುವುದು, ವಾದ್ಯ ಬಾರಿಸುವುದು, ವ್ಯಾಖ್ಯಾನ ಕೊಡುವುದು, ಸನ್ನೆ ಅಥವಾ ನಕಲಿ ಪ್ರದರ್ಶನವನ್ನು ಹಾಗೂ ಸಾರ್ವಜನಿಕ ಸಭ್ಯತೆ ಅಥವಾ ನೀತಿಯನ್ನು ಆಕ್ರಮಿಸಬಹುದಾದ ಕೃತ್ಯಗಳನ್ನು ಮಾಡುವುದನ್ನು ನಿಷೇಧಿಸಲಾಗಿದೆ.
9. ಸಾರ್ವಜನಿಕವಾಗಿ ಯಾವುದೇ ವ್ಯಕ್ತಿ ಪ್ರಚೋದನಾತ್ಮಕ ಹಾಗೂ ಉದ್ವೇಗಕಾರಿ ಹಾಡುಗಳು, ಕೂಗಾಟ ಮಾಡುವುದನ್ನು ಹಾಗೂ ವ್ಯಕ್ತಿಗಳ ತೇಜೋವಧೆ ಮಾಡುವಂತಹ ಚಿತ್ರಗಳು, ಚಿಹ್ನೆಗಳು, ಪ್ರತಿಕೃತಿಗಳು ಮುಂತಾದವುಗಳನ್ನು ಪ್ರದರ್ಶಿಸುವುದಾಗಿ ಹಾಗೂ ಸಾರ್ವಜನಿಕ ಗಾಂಭೀರ್ಯ ಹಾಗೂ ನೈತಿಕತೆಗೆ ಭಂಗ ತರುವಂತಹ ಅಥವಾ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವಂತಹ ಯಾವುದೇ ಕೃತ್ಯಗಳಲ್ಲಿ ತೊಡಗುವುದನ್ನು ನಿಷೇಧಿಸಲಾಗಿದೆ.
10. ಯಾವುದೇ ವ್ಯಕ್ತಿ ಬಹಿರಂಗವಾಗಿ ಮೇಲೆ ವಿವರಿಸಿದ ಮಾರಕಾಸ್ತ್ರಗಳು, ಸ್ಫೋಟಕ ವಸ್ತುಗಳು, ವಿನಾಶಕಾರಿ ವಸ್ತುಗಳು ಹಾಗೂ ಇತರೆ ಆಕ್ಷೇಪಾರ್ಹ ವಸ್ತುಗಳನ್ನು ಹೊಂದಿದ್ದು, ಕಂಡುಬಂದ ಕೂಡಲೇ ಅವುಗಳನ್ನು ವಶಪಡಿಸಿಕೊಳ್ಳಲು ಪೊಲೀಸ್ ಅಧಿಕಾರಿಗಳಿಗೆ ಅಧಿಕಾರ ಇರುತ್ತದೆ. ಅಂಥಹ ಮಾರಕಾಸ್ತ್ರಗಳನ್ನು ಸರಕಾರಕ್ಕೆ ಮುಟ್ಟುಗೋಲು ಮಾಡಿಕೊಳ್ಳಲಾಗುವುದು. ಅಲ್ಲದೇ ಸಂಬಂಧಿಸಿದ ವ್ಯಕ್ತಿಗಳ ಮೇಲೆ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು.
11. ಸದ್ರಿ ಆದೇಶವು ಕರ್ತವ್ಯ ನಿರತ ಪೊಲೀಸ್ ಅಧಿಕಾರಿಗಳು/ಸಿಬ್ಬಂದಿಗಳಿಗೆ ಹಾಗೂ ಸರ್ಕಾರಿ ಕರ್ತವ್ಯದಲ್ಲಿರುವ ಅಧಿಕಾರಿ/ಸಿಬ್ಬಂದಿಗಳಿಗೆ ಅನ್ವಯಿಸುವುದಿಲ್ಲ

ಈ ಆದೇಶವನ್ನು ದಿನಾಂಕ: 02-11-2026 ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಿರುತ್ತೇನೆ.

(ಸ್ವರೂಪ.ಟಿ.ಕೆ ,ಭಾ.ಆ.ಸೇ)
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ಉಡುಪಿ ಜಿಲ್ಲೆ, ಉಡುಪಿ
2/11/26

ಪ್ರತಿ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ(ಕಾನೂನುಮತ್ತು ಸುವ್ಯವಸ್ಥೆ), ವಿಧಾನಸೌಧ ಬೆಂಗಳೂರು
2) ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು
3) ಮುಖ್ಯಕಾರ್ಯನಿರ್ವಾಹಣಾಧಿಕಾರಿ ಜಿಲ್ಲಾ ಪಂಚಾಯತ್ ಉಡುಪಿ -ಇವರಿಗೆ ಮುಂದಿನ ನಿಯಮಾನುಸಾರ ಸೂಕ್ತ ಕ್ರಮಕ್ಕಾಗಿ
4) ಪೊಲೀಸ್ ಅಧೀಕ್ಷಕರು, ಉಡುಪಿ ಜಿಲ್ಲೆ, ಉಡುಪಿ -ಇವರಿಗೆ ಮುಂದಿನ ನಿಯಮಾನುಸಾರ ಸೂಕ್ತ ಕ್ರಮಕ್ಕಾಗಿ.
5) ಉಪವಿಭಾಗ ದಂಡಾಧಿಕಾರಿ ಹಾಗೂ ಸಹಾಯಕ ಕಮೀಷನರ್, ಕುಂದಾಪುರ ಉಪವಿಭಾಗ ಇವರಿಗೆ ಸೂಕ್ತ ಕ್ರಮಕ್ಕಾಗಿ
6) ಜಿಲ್ಲಾ ವಾರ್ತಾ ಮತ್ತು ಪ್ರಚಾರಾಧಿಕಾರಿಯವರು, ಉಡುಪಿ ಜಿಲ್ಲೆ, ಉಡುಪಿ ಇವರಿಗೆ/- ಈ ಅಧಿಸೂಚನೆಯನ್ನು ಜಿಲ್ಲೆಯ ವಾರ್ತಾ ಮಾಧ್ಯಮಗಳಲ್ಲಿ ಪ್ರಚಾರ ಮಾಡುವಂತೆ ಕೋರಿದೆ.
7) ತಾಲೂಕು ದಂಡಾಧಿಕಾರಿ ಹಾಗೂ ತಹಶೀಲ್ದಾರರು ತಹಶೀಲ್ದಾರರು ಉಡುಪಿ ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ